## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಯಲ್ಲಿ ಕೆರೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡ ಪ್ರಕರಣಗಳಿಗೆ ಭೂ ಪರಿಹಾರ ಮೊತ್ತ ನೀಡಲು ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ. ಚಿತ್ರದುರ್ಗ ರವರ ಪತ್ರ ಸಂ:ಜಿಪಂಅ(6):ನ್ಯಾಯಾಲಯ ಪ್ರಕರಣ:ಸಿಆರ್-92/2014-15 ದಿ:9-12-2016
2. ಆರ್ಥಿಕ ಇಲಾಖೆಯ ಆದೇಶ ಸಂ:ಆಇ/178/ ಬಿಆರ್ಎಸ್/2016 ದಿ:27-1-2017
3. ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂ:ಆಇ/465/ವೆಚ್ಚ-6/2016 ದಿ:31-1-2017

**ಪ್ರಸ್ತಾವನೆ:**

ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಯಲ್ಲಿ ಕೆರೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡ ಪ್ರಕರಣಗಳಿಗೆ ಭೂ ಪರಿಹಾರ ಮೊತ್ತ ರೂ.180.96 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ-1ರ ಪತ್ರದಲ್ಲಿ ಕೋರಲಾಗಿದೆ.

ಸದರಿ ಪತ್ರದನ್ವಯ ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಯಲ್ಲಿ ಕೆರೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡ ಪ್ರಕರಣಗಳಿಗೆ ಭೂ ಪರಿಹಾರ ನೀಡಲು ಆರ್ಥಿಕ ಇಲಾಖೆಯು ಮೇಲೆ ಓದಲಾದ (2) ಮತ್ತು (3)ರಲ್ಲಿ ಆರ್ಥಿಕ ಇಲಾಖೆಯ ಆದೇಶ ಸಂ:ಆಇ/178/ ಬಿಆರ್ಎಸ್/2016 ದಿ: 27-1-2017ರಲ್ಲಿ ಲೆಕ್ಕ ಶೀರ್ಷಿಕೆ: 4702-00-101-1-14-132 (ಯೋಜನೆ) ಅಡಿ ಹಾಗೂ ರೂ.180.96 ಲಕ್ಷಗಳ ಹೆಚ್ಚುವರಿ ಅನುದಾನವನ್ನು 2016-17ನೇ ಸಾಲಿನ ಆರ್ಥಿಕ ವರ್ಷದ ಪೂರಕ ಅಂದಾಜು-3 ರಲ್ಲಿ ಒದಗಿಸುವುದಾಗಿ ಸಹಮತಿ ನೀಡಿರುತ್ತದೆ.

ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಯಲ್ಲಿ ಕೆರೆ ನಿರ್ಮಾಣಕ್ಕಾಗಿ ಭೂಸ್ವಾಧೀನಪಡಿಸಿಕೊಂಡ ಭೂಸ್ವಾಧೀನದ ಪರಿಹಾರ ಮೊತ್ತ ಪಾವತಿಗಾಗಿ ಲೆಕ್ಕ ಶೀರ್ಷಿಕೆ: 4702-00-101-1-14-132 (ಯೋಜನೆ) ಅಡಿ ರೂ.180.96 ಲಕ್ಷಗಳನ್ನು ಚಿತ್ರದುರ್ಗ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:99:ಆರ್ಆರ್ಸಿ:2016, ಬೆಂಗಳೂರು, ದಿನಾಂಕ:2-2-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಯಲ್ಲಿ ಕೆರೆ ನಿರ್ಮಾಣಕ್ಕಾಗಿ ಭೂಸ್ವಾಧೀನಪಡಿಸಿಕೊಂಡ ಭೂಸ್ವಾಧೀನದ ಪರಿಹಾರ ಮೊತ್ತ ಪಾವತಿಗಾಗಿ ಲೆಕ್ಕ ಶೀರ್ಷಿಕೆ-4702-00-101-1-14-132 (ಯೋಜನೆ) ಅಡಿ,

ರೂ.180.96 ಲಕ್ಷಗಳನ್ನು **(ರೂಪಾಯಿಗಳು ಒಂದುನೂರ ಎಂಬತ್ತು ಲಕ್ಷದ ತೊಂಬತ್ತಾರು ಸಾವಿರಗಳು ಮಾತ್ರ)**ಗಳನ್ನು ಚಿತ್ರದುರ್ಗ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

-

**ಷರತ್ತುಗಳು:**

1. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಅನುದಾನವನ್ನು ಚಿತ್ರದುರ್ಗ ಜಿಲ್ಲೆ ವ್ಯಾಪ್ತಿಯ ಕೆರೆ ನಿರ್ಮಾಣಕ್ಕಾಗಿ ಭೂಸ್ವಾಧೀನಪಡಿಸಿಕೊಂಡ ಭೂಸ್ವಾಧೀನದ ಪರಿಹಾರ ಮೊತ್ತ ಪಾವತಿಗಾಗಿ ಮಾತ್ರ ಉಪಯೋಗಿಸತಕ್ಕದ್ದು.

2. ಈ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ ಹಾಗೂ ಯಾವುದೇ ಕಾರಣಕ್ಕೂ ವ್ಯಪಗತವಾಗದಂತೆ ನೋಡಿಕೊಳ್ಳತಕ್ಕದ್ದು.

3. ಭೂಸ್ವಾಧೀನ ಪಡಿಸಿಕೊಂಡ ಕೆರೆಗಳ ವಿವರಗಳನ್ನು ಇಲಾಖೆಯ ಆಸ್ತಿ ಮತ್ತು ಹೊಣೆಗಾರಿಕೆಯ (Assets Register) ಪುಸ್ತಕದಲ್ಲಿ ದಾಖಲಿಸತಕ್ಕದ್ದು.

4. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಗೆ ಒದಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂಖ್ಯೆ: ಆಇ/465/ವೆಚ್ಚ-06/2016 ದಿನಾಂಕ 31-1-2017 ರಲ್ಲಿ ನೀಡಿದ ಸಹಮತಿ ಹಾಗೂ ಆದೇಶ ಸಂಖ್ಯೆ: ಆಇ/178/ಬಿಆರ್ಎಸ್/2016 ದಿನಾಂಕ 27-1-2017 ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.

10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
17. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ
18. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ದಾವಣಗೆರೆ
19.ಕಾರ್ಯಪಾಲಕ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ವಿಭಾಗ ಚಿತ್ರದುರ್ಗ
20 ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
21. ರಕ್ಷಾ ಕಡತ / ಹೆಚ್ಚುವರಿ ಪ್ರತಿ.